# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 773 |
| ಸದಸ್ಯರ ಹೆಸರು | : ಶ್ರೀ ಎನ್.ಎಸ್. ಬೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 21.08.2026 |
| ಉತ್ತರಿಸುವ ಸಚಿವರು | : ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತುಂಗಭದ್ರಾ ಎಡದಂಡೆ ಕಾಲುವೆಯ ಮುಖ್ಯ ಕಾಲುವೆ ಆಧುನೀಕರಣಕ್ಕಾಗಿ ಪಿಎಂಕೆಎಸ್‌ವೈ ಯೋಜನೆ ಅಡಿ ಸಲ್ಲಿಸಿರುವ ಪ್ರಸ್ತಾವನೆಗೆ ಕೇಂದ್ರ ಸರ್ಕಾರದಿಂದ ಅನುಮೋದನೆ ನೀಡಲಾಗಿದೆಯೇ; ನೀಡದಿದ್ದಲ್ಲಿ, ಅನುಮೋದನೆಯ ವಿಳಂಬಕ್ಕೆ ಕಾರಣಗಳೇನು; | ತುಂಗಭದ್ರಾ ಎಡದಂಡೆ ಕಾಲುವೆ ಹಾಗೂ ಇದರ ವಿತರಣಾ ಕಾಲುವೆಗಳ ಅಭಿವೃದ್ಧಿ/ಆಧುನೀಕರಣ ಹಾಗೂ ಒಟ್ಟು 491 ಸ್ಟ್ರಕ್ಚರ್ಸ್‌ಗಳ (CD & other structures) ದುರಸ್ತಿ/ ಮರುನಿರ್ಮಾಣ ಕಾಮಗಾರಿಗಳ ರೂ.1590.00 ಕೋಟಿ ಮೊತ್ತದ ವಿಸ್ತೃತ ಯೋಜನಾ ವರದಿಗೆ ಅನುಮೋದನೆ ಕೋರಿ ಪ್ರಸ್ತಾವನೆಯನ್ನು ದಿನಾಂಕ:17.06.2025 ರಲ್ಲಿ ಕೇಂದ್ರ ಜಲ ಆಯೋಗ, ನವದೆಹಲಿಗೆ ಸಲ್ಲಿಸಲಾಗಿರುತ್ತದೆ.<br><br>ದಿನಾಂಕ:22.05.2026ರಂದು ಜರುಗಿದ ಕೇಂದ್ರ ಜಲ ಸಂಪನ್ಮೂಲ, ನದಿ ಅಭಿವೃದ್ಧಿ ಮತ್ತು ಗಂಗಾ ಪುನರುಜ್ಜೀವನ ಇಲಾಖೆಯ Technical Advisory Committeeಯ 162ನೇ ಸಭೆಯಲ್ಲಿ ಸದರಿ ಪ್ರಸ್ತಾವನೆ ಕುರಿತು ಕೆಲವೊಂದು ಅಂಶಗಳಿಗೆ ಸ್ಪಷ್ಟೀಕರಣವನ್ನು ಕೋರಿರುತ್ತಾರೆ. ಈ ಸಂಬಂಧ ಪಾಲನಾ ವರದಿಯನ್ನು ಮುಂಬರುವ Technical Advisory Committee ಸಭೆಯಲ್ಲಿ ಮಂಡಿಸುವ ಸಲುವಾಗಿ ದಿನಾಂಕ:24.07.2026ರಂದು ಕೇಂದ್ರ ಜಲ ಆಯೋಗಕ್ಕೆ ಸಲ್ಲಿಸಲಾಗಿರುತ್ತದೆ. |
| ಆ) | ದಿನಾಂಕ:25.06.2026 ರಂದು ಮುನಿರಾಬಾದನಲ್ಲಿ ನಡೆದಿರುವಂತಹ ಮೂರು ರಾಜ್ಯಗಳ ಮುಖ್ಯಮಂತ್ರಿಗಳ ಸಭೆ ನಂತರ ತುಂಗಭದ್ರಾ ಜಲಾಶಯದ ಸಮಸ್ಯೆಗಳ ಬಗೆಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ತುಂಗಭದ್ರಾ ಅಣೆಕಟ್ಟೆಯ ಎಲ್ಲಾ 33 ಗೇಟುಗಳ ಬದಲಾವಣೆ ಕಾಮಗಾರಿ ಪೂರ್ಣಗೊಂಡ ಹಿನ್ನೆಲೆಯಲ್ಲಿ, ದಿನಾಂಕ:25.06.2026ರಂದು ಕೇಂದ್ರ ಜಲಶಕ್ತಿ ಸಚಿವರಾದ ಮಾನ್ಯ ಶ್ರೀ ಸಿ.ಆರ್. ಪಾಟೀಲ್, ಕರ್ನಾಟಕದ ಮಾನ್ಯ ಮುಖ್ಯಮಂತ್ರಿಗಳು, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಮಾನ್ಯ ಮುಖ್ಯಮಂತ್ರಿಗಳ ಉಪಸ್ಥಿತಿಯಲ್ಲಿ ಹೊಸಪೇಟೆಯಲ್ಲಿ ಜರುಗಿದ ಹೊಸ ಸ್ಪಿಲ್‌ವೇ ಗೇಟ್‌ಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ತುಂಗಭದ್ರಾ ಜಲಾಶಯದಲ್ಲಿ ಸುಮಾರು 26 ಟಿಎಂಸಿಯಷ್ಟು ಹೂಳು ತುಂಬಿರುವ ಹಿನ್ನೆಲೆಯಲ್ಲಿ ಸಂಗ್ರಹಣೆ ಕೊರತೆಯನ್ನು ನೀಗಿಸುವ ಸಂಬಂಧ ತಾಂತ್ರಿಕ ವರದಿ ತಯಾರಿಸಿ ಕ್ರಮ ಕೈಗೊಳ್ಳಲು ನಿರ್ಧರಿಸಲಾಗಿರುತ್ತದೆ.<br><br>ಅದರಂತೆ, Tungabhadra Basin Issues ಕುರಿತಂತೆ ಕೇಂದ್ರ ಜಲ ಶಕ್ತಿ ಸಚಿವಾಲಯವು OM ದಿನಾಂಕ:11.07.2026ರಲ್ಲಿ Member (WP & P), CWC, New Delhi ಇವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು (High Power Committee) ರಚಿಸಲಾಗಿದೆ. |
| ಇ) | ರಾಯಚೂರು ಜಿಲ್ಲೆಯ ರಾಯಚೂರು ತಾಲ್ಲೂಕಿನ ಬೋಳಮಾನದೊಡ್ಡಿ ಏತ ನೀರಾವರಿ ಯೋಜನೆ ಮಂಜೂರು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಕೃಷ್ಣಾ ಮೇಲ್ದಂಡೆ ಯೋಜನಾ ಹಂತ-3ರಡಿ ನಾರಾಯಣಪುರ ಬಲದಂಡೆ ಕಾಲುವೆ ವಿಸ್ತರಣೆ ಕಿ.ಮೀ.95.00 ರಿಂದ 168.00 (73ಕಿ.ಮೀ) ರವರೆಗಿನ ಕಾಮಗಾರಿಯು ಒಂದು ಉಪ ಯೋಜನೆಯಾಗಿದ್ದು, ಸದರಿ ಯೋಜನೆಯಡಿ ವಿತರಣಾ ಕಾಲುವೆ ಸಂ.31 (ಬೋಳಮಾನದೊಡ್ಡಿ ಏತ ನೀರಾವರಿ ಒಳಗೊಂಡಂತೆ) ಕೈಗೆತ್ತಿಕೊಳ್ಳುವುದರಿಂದ ರಾಯಚೂರು ತಾಲ್ಲೂಕಿನಡಿ ಸುಮಾರು 16,819 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಯೋಜಿಸಲಾಗಿದೆ.<br><br>ಸದರಿ ಯೋಜನೆಯ ವಿವರವಾದ ಯೋಜನಾ ವರದಿ ಸಿದ್ಧಪಡಿಸಲಾಗಿದ್ದು, ಮುಖ್ಯ ಇಂಜಿನಿಯರ್, ಭೀಮರಾಯನಗುಡಿ ಇವರ ಹಂತದಲ್ಲಿ ಪರಿಶೀಲನೆಯಲ್ಲಿದೆ. |

**ಜಸಂಇ 106 ಎಂಎಲ್ಎ 2026**

(ಎನ್. ಚೆಲುವರಾಯಸ್ವಾಮಿ)
ಜಲಸಂಪನ್ಮೂಲ ಸಚಿವರು